ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ      ದಿನಾಂಕ : DATE : 09/07/2019

## ಸ್ಪೀಕರ್ ಶಾಸಕರ ರಾಜೀನಾಮೆ ಅಂಗೀಕರಿಸಲಿ: ಬಸವರಾಜ ಹೊರಟ್ಟಿ

ಹುಬ್ಬಳ್ಳಿ: ಬ್ಲ್ಯಾಕ್‌ಮೇಲ್ ತಂತ್ರ ಅನುಸರಿಸುತ್ತಿರುವ ಶಾಸಕರ ರಾಜೀನಾಮೆಯನ್ನು ಸ್ಪೀಕರ್ ರಮೇಶಕುಮಾರ್ ತಕ್ಷಣ ಅಂಗೀಕರಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಸಲಹೆ ನೀಡಿದ್ದಾರೆ.



ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಚುನಾವಣೆಯಲ್ಲಿ ಜಯಗಳಿಸಿದವರೆಲ್ಲರೂ ಸಚಿವರಾಗಲು ಸಾಧ್ಯವಿಲ್ಲ. ಹತ್ತು ಅತೃಪ್ತ ಶಾಸಕರ ರಾಜೀನಾಮೆಯನ್ನು ಸ್ಪೀಕರ್ ಅಂಗೀಕಾರ ಮಾಡಿದರೆ ಅವರೆಲ್ಲರ ಬಣ್ಣ ಬಯಲಾಗುತ್ತದೆ" ಎಂದು ಕಿಡಿಕಾರಿದರು.

"ಶಾಸಕರ ರಾಜೀನಾಮೆ ಹಿಂದೆ ಬಿಜೆಪಿ ನಾಯಕರ ಕೈವಾಡ ಇರುವುದು ಸ್ಪಷ್ಟವಾಗಿದ್ದು, ಅತೃಪ್ತರಿಗೆ ನಾನಾ ಆಮಿಷ ಒಡ್ಡಲಾಗುತ್ತಿದೆ. ಮೈತ್ರಿ ಸರಕಾರ ಬೀಳಿಸುವ ಕುತಂತ್ರ ಮಾಡಿರುವ ಬಿಜೆಪಿ ತನಗೆ ಏನೂ ಗೊತ್ತಿಲ್ಲದಂತೆ ನಾಟಕ ಮಾಡುತ್ತಿದೆ. ತೊಟ್ಟಿಲು ತೂಗುತ್ತಲೇ ಕೂಸನ್ನು ಚಿವುಟುವ ಕೆಲಸವನ್ನು ಬಿಜೆಪಿ ಮಾಡುತ್ತಿದೆ" ಎಂದು ಆರೋಪಿಸಿದರು. "ಪ್ರಸ್ತುತ ಮುಖ್ಯಮಂತ್ರಿ ಸ್ಥಾನವನ್ನು ಬದಲಾವಣೆ ಮಾಡುವುದು ಸರಿಯಲ್ಲ. ಸಿದ್ದರಾಮಯ್ಯ, ಇಲ್ಲವೆ ಮಲ್ಲಿಕಾರ್ಜುನ ಖರ್ಗೆ ಸಿಎಂ ಆದರೂ ಈಗಿರುವ ಸಮಸ್ಯೆ ಬಗೆಹರಿಯುವುದಿಲ್ಲ" ಎಂದು ಹೊರಟ್ಟಿ ಅಭಿಪ್ರಾಯಪಟ್ಟರು.